ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

33

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 13/2/21

# ಖರ್ಗೆಗೆ ಒಲಿದ ರಾಜ್ಯಸಭೆ ಪ್ರತಿಪಕ್ಷ ನಾಯಕ ಸ್ಥಾನ

**ನವದೆಹಲಿ:** ಕಾಂಗ್ರೆಸ್‌ನ ಹಿರಿಯ ಮುಖಂಡ ಗುಲಾಂ ನಬಿ ಆಜಾದ್ ಫೆ.15ರಂದು ನಿವೃತ್ತರಾಗುತ್ತಿರುವ ಹಿನ್ನೆಲೆಯಲ್ಲಿ ರಾಜ್ಯಸಭೆಯ ವಿಪಕ್ಷ ನಾಯಕನ ಸ್ಥಾನಕ್ಕೆ ಕರ್ನಾಟಕದ ಹಿರಿಯ ರಾಜಕಾರಣಿ ಮಲ್ಲಿಕಾರ್ಜುನ ಖರ್ಗೆ ಅವರನ್ನು ಕಾಂಗ್ರೆಸ್ ಆಯ್ಕೆ ಮಾಡಿದೆ. ಪಕ್ಷ ಈ ಸಂಬಂಧ ರಾಜ್ಯಸಭಾಧ್ಯಕ್ಷ ಎಂ.ವೆಂಕಯ್ಯನಾಯ್ಡು ಅವರಿಗೆ ಪತ್ರ ಬರೆದಿದೆ. ಖರ್ಗೆ 2020ರ ಜೂ.12ರಿಂದ ರಾಜ್ಯಸಭೆ ಸದಸ್ಯರಾಗಿದ್ದಾರೆ. ಈ ಹಿಂದೆ 2014ರಿಂದ 2019ರ ಅವಧಿಯಲ್ಲಿ ಲೋಕಸಭೆಯಲ್ಲಿ ಕಾಂಗ್ರೆಸ್ ಸಂಸದೀಯ ಪಕ್ಷದ ನಾಯಕರಾಗಿ ಕರ್ತವ್ಯ ನಿರ್ವಹಿಸಿದ್ದರು. ಆಗ ಕಾಂಗ್ರೆಸ್‌ಗೆ ವಿಪಕ್ಷ ಸ್ಥಾನಕ್ಕೆ ಬೇಕಾದ ಸದಸ್ಯ ಬಲ ಇಲ್ಲದೇ ಇದ್ದ ಕಾರಣ ಆ ಹುದ್ದೆ ಸಿಕ್ಕಿರಲಿಲ್ಲ. ಲೋಕಸಭೆಯ ನಿಯಮಾನುಸಾರ ಲೋಕಸಭೆಯ ಒಟ್ಟು ಸದಸ್ಯ ಬಲದ ಕನಿಷ್ಠ ಶೇಕಡ 10 ಸದಸ್ಯ ಬಲ ಇದ್ದರಷ್ಟೇ ವಿಪಕ್ಷ ಸ್ಥಾನ ಸಿಗುತ್ತದೆ. ಖರ್ಗೆ ಸೋಲಿಲ್ಲದ ಸರದಾರನಾಗಿ ಸತತ ಒಂಬತ್ತು ನಿರಂತರ ಅವಧಿಗೆ (1972ರಿಂದ 2008) ಗುರುಮಠಕಲ್ (8 ಬಾರಿ), ಒಮ್ಮೆ ಚಿತ್ತಾಪುರ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸಿದ್ದಾರೆ. 2009, 14ರಲ್ಲಿ ಕಲಬುರಗಿ ಲೋಕಸಭೆ ಕ್ಷೇತ್ರದಿಂದ ಆಯ್ಕೆಯಾಗಿದ್ದರು. 2019ರ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಯ ಉಮೇಶ್ ಜಾಧವ್ ವಿರುದ್ಧ ಸೋಲು ಕಂಡಿದ್ದರು. ಯುಪಿಎ ಸರ್ಕಾರದ ಅವಧಿಯಲ್ಲಿ ಕೇಂದ್ರದಲ್ಲಿ ರೈಲ್ವೆ ಮತ್ತು ಕಾರ್ಮಿಕ ಸಚಿವರಾಗಿದ್ದರು.



» **ಗುಲಾಂನಬಿ ಆಜಾದ್ ನಿವೃತ್ತಿ ಹಿನ್ನೆಲೆ**